ದಿನಾಂಕ: 15-09-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ. ಎನ್. ಹೆಚ್.ಎ. ವಾದಿ ಪರ ವಕೀಲರಿಂದಃ

ನನ್ನ ಸಾಕ್ಷಿ ಹೇಳಿಕೆಯ ಭಾಗವಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನನ್ನ ಕುಟುಂಬದ ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ದೃಢೀಕೃತ ಪತ್ರದ Index of lands ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಒಂದು ಹಳೇ ಕೈಬರಹದ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ದಿಃ 10.07.1952 ರ ದೃಢೀಕೃತ ಕ್ರಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಒಂದು ಋಣಭಾರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಎರಡು ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ಮತ್ತು 7 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯ ಹಾಗೂ ದಾಸ್ತಾವೇಜುಗಳನ್ನು ಪರಿಶೀಲಿಸಿ ನನ್ನ ದಾವೆಯನ್ನು ಪುರಸ್ಕರಿಸಿ ನನ್ನ ದಾವೆಯಲ್ಲಿ ಕೋರಿರುವಂತೆ ಡಿಕ್ರಿ ಮಾಡಬೇಕೆಂದು ಕೋರುತ್ತೇನೆ.

**(**ಪ್ರತಿವಾದಿಯು ಏಕಪಕ್ಷೀಯ ಆಗಿರುವ ಕಾರಣ ಪಾಟೀ ಸವಾಲು ಇಲ್ಲ ಎಂದು ಪರಿಗಣಿಸಲಾಯಿತು**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-

ಹೆ.ಸಿ.ನ್ಯಾಮತ್ತು ಜೆಎಂಎಫ್‌ಸಿ,

ಗೌರಿಬಿದನೂರು